ಕರ್ನಾಟಕ ವಿಧಾನ ಪರಿಷತ್ತು

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1091
2)	ಸದಸ್ಯರ ಹೆಸರು	ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
3)	ಉತ್ತರಿಸಬೇಕಾದ ದಿನಾಂಕ	22-12-2021
4)	ಉತ್ತರಿಸಬೇಕಾದ ಸಚಿವರು	ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕೇಂದ್ರ ಸರ್ಕಾರದ "ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ ಯಡಿ 2021-22ನೇ ಸಾಲಿನಲ್ಲಿ ಜಾರಿಗೊಳಿಸಲು ತಯಾರಿಸಿರುವ 376 ಕೋಟಿ ರೂಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆ ಅನುಷ್ಠಾನ ಯಾವ ಹಂತದಲ್ಲಿದೆ; ಈ ಅಂದಾಜು ಮೊತ್ತದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪಾಲು ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)	ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ 2021-22ನೇ ಸಾಲಿಗೆ ಒಟ್ಟು ರೂ. 375.67 ಕೋಟಿ ಒಟ್ಟು ಯೋಜನಾ ವೆಚ್ಚದ ಕ್ರಿಯಾ ಯೋಜನೆಯನ್ನು ಸಲ್ಲಿಸಲಾಗಿತ್ತು. ಕೇಂದ್ರ ಸರ್ಕಾರವು ಇದರಲ್ಲಿ ಇದುವರೆಗೂ ರೂ.230.09 ಕೋಟಿ ಒಟ್ಟು ಯೋಜನಾ ವೆಚ್ಚದ ಫಲಾನುಭವಿ ಆಧಾರಿತ ಯೋಜನೆಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿರುತ್ತದೆ. ಇದರಲ್ಲಿ ಕೇಂದ್ರ ಸರ್ಕಾರದ ಪಾಲು ರೂ.70.50 ಕೋಟಿ, ರಾಜ್ಯದ ಪಾಲು ರೂ.48.02 ಕೋಟಿ ಹಾಗೂ ಫಲಾನುಭವಿ ಪಾಲು ರೂ.111.58 ಕೋಟಿಗಳಾಗಿರುತ್ತದೆ. ಕೇಂದ್ರ ಸರ್ಕಾರವು ಆಡಳಿತಾತ್ಮಕ ಮಂಜೂರಾತಿ ನೀಡಿದ ಪ್ರಕಾರ ಜಿಲ್ಲಾವಾರು ಗುರಿಗಳನ್ನು ನಿಗದಿಪಡಿಸಲಾಗಿದ್ದು, ಅದರಂತೆ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. ಇದುವರೆಗೂ 374 ಫಲಾನುಭವಿಗಳಿಗೆ ರೂ.21.07 ಕೋಟಿ ಸಹಾಯಧನಕ್ಕೆ ಆರ್ಥಿಕ ಮಂಜೂರಾತಿ ನೀಡಲಾಗಿದ್ದು, ರೂ.7.39 ಕೋಟಿ ಸಹಾಯಧನ ಬಿಡುಗಡೆ ಮಾಡಲಾಗಿದೆ. ಈ ಯೋಜನೆಯಡಿ ಸಾಮಾನ್ಯ ವರ್ಗಕ್ಕೆ ಘಟಕ ವೆಚ್ಚದ ಶೇಕಡಾ 40 ಮತ್ತು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಹಾಗೂ ಮಹಿಳಾ ವರ್ಗಕ್ಕೆ ಘಟಕ ವೆಚ್ಚದ ಶೇಕಡಾ 60 ರಷ್ಟು ಸಹಾಯಧನ ನೀಡಲಾಗಿದೆ.
ಆ)	ರಾಜ್ಯದಲ್ಲಿ ಸರ್ಕಾರ ಸ್ಥಾಪಿಸಲು ಉದ್ದೇಶಿಸಿರುವ 16 ಮೀನು ಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣ ಮಾಡುವ ಯೋಜನೆಯ ಅನುಷ್ಠಾನ ಯಾವ ಹಂತದಲ್ಲಿದೆ; ಈ ಯೋಜನೆ ಕಾರ್ಯವ್ಯಾಪ್ತಿ ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು;	2021-22ನೇ ಸಾಲಿನಲ್ಲಿ ರಾಜ್ಯದ ಮೀನುಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣ ಯೋಜನೆಯಡಿ ಆಧುನಿಕ ಮೀನುಗಾರಿಕೆ ತಾಂತ್ರಿಕತೆಗಳನ್ನು ಅಳವಡಿಸಿ ರಾಜ್ಯದ 16 ಮೀನುಮರಿ ಉತ್ಪಾದನಾ ಕೇಂದ್ರಗಳ ಉನ್ನತೀಕರಣ ಕೈಗೊಳ್ಳಲು ಉದ್ದೇಶಿಸಲಾಗಿದೆ. ಈ ಯೋಜನೆಗೆ 2021-22ನೇ ಸಾಲಿನಲ್ಲಿ ರೂ 200.00 ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದೆ. ಈ ಯೋಜನೆಯಡಿ ಮೀನುಮರಿ ಉತ್ಪಾದನಾ ಕೇಂದ್ರಗಳಿಗೆ ಬೇಕಾದ ಏರೇಟರ್, ಡಿಫ್ಯೂಸರ್, ಬ್ಲೋವರ್, ಪಲ್ವರೈಸರ್, ಬಾಯ್ಲರ್, ನೀರು ಪರೀಕ್ಷಾ ಕಿಟ್ ಗಳು, ಇತರೆ ಸಲಕರಣೆ / ಉಪಕರಣಗಳು, ಪೋರ್ಟೆಬಲ್ ಹ್ಯಾಚರಿಗಳನ್ನು ಖರೀದಿಸಲು ಮತ್ತು ಹೊಸ ಹ್ಯಾಚರಿಗಳನ್ನು ನಿರ್ಮಾಣ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಈ)	ರಾಜ್ಯದಲ್ಲಿನ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ವತಿಯಿಂದ ಮೀನು ಮಾರಾಟ ಘಟಕಗಳು ಹಾಗೂ ಮತ್ಸ್ಯ ದರ್ಶಿನಿಗಳನ್ನು 30 ಕೋಟಿ ರೂಗಳ ಅಂದಾಜು ಮೊತ್ತದಲ್ಲಿ ಸ್ಥಾಪಿಸುವ ಯೋಜನೆಯು ಅನುಷ್ಠಾನ ಯಾವ ಹಂತದಲ್ಲಿದೆ? (ಸಂಪೂರ್ಣ ಮಾಹಿತಿ ನೀಡುವುದು)	2021-22ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-74 ರಂತೆ 2021-22ನೇ ಸಾಲಿನಲ್ಲಿ ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಮೀನು ಮಾರಾಟ ಘಟಕಗಳನ್ನು ಮತ್ತು ಮತ್ಸ್ಯದರ್ಶಿನಿಗಳನ್ನು 30 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲು ಆದೇಶ ಸಂಖ್ಯೆ: ಪಸಂಮೀ ಇ-161 ಮೀಇಯೋ 2021, ದಿನಾಂಕ: 13-05-2021 ರಲ್ಲಿ ಸದರಿ ಪ್ರಸ್ತಾವನೆಯನ್ನು ನಿಗಮದ ವತಿಯಿಂದ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿ, ಸದರಿ ಯೋಜನೆಗ ತಗಲುವ ವೆಚ್ಚವನ್ನು ನಿಗಮದ ಆಂತರಿಕ ಸಂಪನ್ಮೂಲದಿಂದ ಭರಿಸಲು ಆದೇಶಿಸಲಾಗಿದೆ. ಪ್ರಸ್ತುತ ನಿಗಮವು ಈ ಯೋಜನೆಗೆ ರೂ. 30.00 ಕೋಟಿಗಳ ವೆಚ್ಚವನ್ನು ಭರಿಸುವಷ್ಟು ಆರ್ಥಿಕವಾಗಿ ಸಬಲವಾಗಿಲ್ಲದ ಕಾರಣ ಈ ಯೋಜನೆಯು ಅನುಷ್ಠಾನವಾಗಿರುವುದಿಲ್ಲ.

ಸಂಖ್ಯೆ: ಪಸಂಮೀ ಇ-185 ಮೀಇಇ 2021

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು